ಶನಿವಾರ 18.04.2026 ಬೆಂಗಳೂರು ಬೆಲೆ: 5ರೂ 2 ಪುಟಗಳು ಸಂಪುಟ 01 ಸಂಚಿಕೆ 170 Saturday Bangalore Price: 5/- Rs 2 Pages Volume 01 Issue 170


ಅಭಿಷೇಕ್ ಚಿಕ್ಕಮಾರನಹಳ್ಳಿ ಸಾರಥ್ಯದಲ್ಲಿ

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ

ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com
epaper.digitalvarthe.com
Mob: 9538786812
Office: 9480847498

## ಕುಡಿಯುವ ನೀರಿಗಾಗಿ 419.50 ಕೋಟಿ ರೂ. ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಲಭ್ಯ

### ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ

**ಬೆಂಗಳೂರು:**ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

ಇಂದು ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧ ಸಭಾಂಗಣದಲ್ಲಿ ನಡೆದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ಜರುಗಿತು.

ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ.

**ಕುಡಿಯುವ ನೀರಿಗೆ ತೊಂದರೆ ಯಾದರೆ ಜಿಲ್ಲಾಧಿಕಾರಿಗಳೇ ಹೊಣೆ:** ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳೇ ಇದಕ್ಕೆ ಹೊಣೆಯಾಗುತ್ತಾರೆ. ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚಿಸಿದರು.

ಈ ಬಾರಿ ಎಪ್ರಿಲ್-ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡು ಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಯಾವ ರೀತಿಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂಬ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಚನೆಗಳನ್ನು ನೀಡಬೇಕು ಎಂದರು.

**ಕುಡಿಯುವ ನೀರಿಗೆ ಅನುದಾನದ ಕೊರತೆಯಿಲ್ಲ:** ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು ಯಾವುದೇ ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿಗಳ ವರದಿ ಆಧಾರದಲ್ಲಿ ಅಗತ್ಯ ಅನುದಾನವನ್ನು ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದರು.

**114 ತಾಲೂಕುಗಳ 598 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ:** ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ 213 ತಾಲೂಕುಗಳನ್ನು ಹಾಗೂ 2410 ಗ್ರಾಮ ಪಂಚಾಯತ್ಗಳನ್ನು ಗುರುತಿಸಲಾಗಿದೆ. ಪ್ರಸ್ತುತ 114 ತಾಲೂಕುಗಳ 598 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಟ್ಯಾಂಕರ್ಗಳ ಮೂಲಕ 137 ಗ್ರಾಮಗಳಿಗೆ ಒಟ್ಟು 129 ಟ್ಯಾಂಕರ್ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 585 ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆಗೆ ಪಡೆಯಲಾಗಿದ್ದು, ಇದರ ಮೂಲಕ 515ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದರು.

**ಕುಡಿಯುವ ನೀರಿನ ಸಮಸ್ಯೆ ಎದುರಿಸುವ ಗ್ರಾಮಗಳ ಗುರುತಿಸುವಿಕೆ:** ಕಲಬುರಗಿ ಜಿಲ್ಲೆಯ 147 ಗ್ರಾಮ ಪಂಚಾಯತ್,



ಬಾಗಲಕೋಟೆ 114, ಬೆಳಗಾವಿಯ 127, ಚಿಕ್ಕಮಗಳೂರಿನ 115, ಹಾವೇರಿಯ 138, ಮಂಡ್ಯ 130, ತುಮಕೂರಿನ 141 ಹಾಗೂ ಉತ್ತರಕನ್ನಡ ಜಿಲ್ಲೆಯ 125 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಗುರುತಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

**22 ಕೊಳವೆ ಬಾವಿಗಳು ಬಾಡಿಗೆಗೆ:** ಪ್ರಸ್ತುತ 27 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, 95 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಗುರುತಿಸಲಾಗಿದೆ. ಒಟ್ಟು 145 ವಾರ್ಡ್ಗಳಿಗೆ 57 ಟ್ಯಾಂಕರ್ಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದ್ದು, ಬಾಡಿಗೆಗೆ 22 ಕೊಳವೆ ಬಾವಿಗಳನ್ನು ಪಡೆಯಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

**ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದು:** ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಟ್ಯಾಂಕರ್ ನೀರು ಪೂರೈಕೆ ಮಾಡಬೇಕು. ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆ ಪಡೆಯುವುದಕ್ಕೆ ಆದ್ಯತೆ ನೀಡಬೇಕು. ಅಗತ್ಯ ಸಂದರ್ಭದಲ್ಲಿ ಕೊಳವೆ ಬಾವಿ ಕೊರೆಯಬಹುದಾಗಿದೆ ಎಂದು ಮುಖ್ಯಮಂತ್ರಿಗಳು ಗುರುತಿಸಿದರು.

ರಾಜ್ಯದ ಪ್ರಮುಖ 14 ಜಲಾಶಯಗಳಲ್ಲಿ ಪ್ರಸ್ತುತ 321.93 ಟಿ.ಎಂ.ಸಿ ನೀರು ಲಭ್ಯವಿದ್ದು, ಇದು ಒಟ್ಟು ಸಾಮರ್ಥ್ಯದ ಶೇ.36ರಷ್ಟಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 330.35 ಟಿ.ಎಂ.ಸಿ ನೀರು ಲಭ್ಯವಿತ್ತು. ಪ್ರಸುತ ಕುಡಿಯುವ ನೀರಿಗೆ ಸಾಕಷ್ಟು ನೀರು ಜಲಾಶಯಗಳಲ್ಲಿ ಲಭ್ಯವಿದೆ.

ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಿ

ಮಳೆಗಾಲ ವಿಳಂಬವಾಗಿ ಆರಂಭವಾಗುವ ಸಾಧ್ಯತೆಯಿರುವುದರಿಂದ ಜುಲೈ ಮಧ್ಯದವರೆಗೂ ಕುಡಿಯುವ ನೀರಿಗಾಗಿ ಜಲಾಶಯಗಳಲ್ಲಿ ನೀರಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು.

ನೀರಾವರಿಗಿಂತ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜಲಾಶಯಗಳಲ್ಲಿ ನೀರಿನ ಸೋರಿಕೆಯನ್ನು ಗುರುತಿಸಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

**ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಬೇಕು:** ಕುಡಿಯುವ ನೀರಿನ ಕುರಿತಾಗಿ ಸಾರ್ವಜನಿಕರ ಅಹವಾಲುಗಳಿಗೆ ತುರ್ತಾಗಿ ಸ್ಪಂದಿಸಬೇಕು. ಇದಕ್ಕಾಗಿ ತಾಲೂಕು ಹಾಗೂ ವಾರ್ಡ್ ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಬೇಕು. ಜಿಲ್ಲಾ ಮಟ್ಟದ ಕಾರ್ಯಪಡೆ ಸಕ್ರಿಯವಾಗಿ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿಗಳು ತಿಳಿಸಿದರು .

ಎಲ್ಲಾ ಆರ್. ಒ ಘಟಕಗಳು 24/7 ನಿರಂತರ ವಿದ್ಯುತ್ ಸರಬರಾಜಿನೊಂದಿಗೆ ಕಾರ್ಯ ನಿರ್ವಹಿಸುವುದನ್ನು ಖಾತ್ರಿಪಡಿಸಬೇಕು. ಆರ್ ಒ ಘಟಕಗಳ ತಕ್ಷಣದ ದುರಸ್ತಿ ಮತ್ತು ಕುಡಿಯುವ ನೀರಿನ ಪೂರೈಕೆಯಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ತಾಲೂಕು ಮಟ್ಟದಲ್ಲಿ ತಂಡಗಳನ್ನು ನಿಯೋಜಿಸಬೇಕು ಎಂದು ಸೂಚನೆ ನೀಡಿದರು.

**ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಿ:** ಮಧ್ಯಪ್ರಾಚ್ಯದಲ್ಲಿನ ಯುದ್ಧದ ಪರಿಸ್ಥಿತಿಯಿಂದಾಗಿ ಈ ಬಾರಿ ರಸಗೊಬ್ಬರ ಪೂರೈಕೆಯಲ್ಲಿ ಅಡಚಣೆ ಉಂಟಾಗುವ ಸಾಧ್ಯತೆಯಿದೆ. ವ್ಯಾಪಾರಿಗಳು ರಸಗೊಬ್ಬರವನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸಿ ದಾಸ್ತಾನು ಇರಿಸುವುದನ್ನು ತಪ್ಪಿಸಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಸೂಕ್ತ ಸಮಯದಲ್ಲಿ ರಸಗೊಬ್ಬರ ಲಭ್ಯತೆಯನ್ನು ಖಾತ್ರಿಪಡಿಸಲು ಕ್ರಮ ಕೈಗೊಳ್ಳಬೇಕು. ಯೂರಿಯಾ, ಡಿಎಪಿ ಸರಿಯಾಗಿ ವಿತರಣೆಯಾಗುವಂತೆ ನೋಡಿಕೊಳ್ಳಬೇಕು. ಬೇರೆ ರಾಜ್ಯಗಳಿಗೆ ರಸಗೊಬ್ಬರ ಸಾಗಾಟ ಮಾಡುವುದನ್ನು ನಿಯಂತ್ರಿಸಬೇಕು. ಇದಕ್ಕಾಗಿ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ಬಿಗಿಗೊಳಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚನೆ ನೀಡಿದರು.

ಮೇವಿನ ಕೊರತೆ ಸಧ್ಯಕ್ಕೆ ಇಲ್ಲ

ಕಳೆದ ಎರಡು ವರ್ಷಗಳಲ್ಲಿ ಉತ್ತಮ ಮಳೆಯಾಗಿರುವುದರಿಂದ ಮೇವಿನ ಕೊರತೆ ಸಧ್ಯಕ್ಕೆ ಇರುವುದಿಲ್ಲ. ಆದರೆ ಈ ಕುರಿತು ನಿರ್ಲಕ್ಷ್ಯ ವಹಿಸದೆ ಮೇವಿನ ಲಭ್ಯತೆಯನ್ನು ಖಾತ್ರಿಪಡಿಸಬೇಕು ಎಂದರು

ಎಲ್ಲಾ ತಾಲೂಕುಗಳಲ್ಲಿ ಕುಡಿಯುವ ನೀರಿನ ಕುರಿತಾದ ಟಾಸ್ಕ್ ಫೋರ್ಸ್ ಸಭೆ ನಡೆಸಿ ವರದಿ ಸಲ್ಲಿಸಬೇಕು ಮುಖ್ಯಮಂತ್ರಿ ಅವರು ತಿಳಿಸಿದರು.

**ಕಲುಷಿತ ನೀರು ಪೂರೈಕೆಯಾಗದಂತೆ ಕ್ರಮ ವಹಿಸಿ:** ಕಲುಷಿತ ನೀರು ಪೂರೈಕೆಯಾಗಿ ಆರೋಗ್ಯ ಸಮಸ್ಯೆಯಾಗದಂತೆ ಎಲ್ಲಾ ಜಿಲ್ಲೆಗಳಲ್ಲಿ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಈ ಕುರಿತು ಈಗಾಗಲೇ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರಿನಿಂದ ಸಮಸ್ಯೆಯಾಗದಂತೆ ನೋಡಿಕೊಳ್ಳುವುದು ಜಿಲ್ಲಾಧಿಕಾರಿಗಳ ಜವಾಬ್ದಾರಿ ಎಂದು ಸ್ಪಷ್ಟಪಡಿಸಿದರು.

ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ: ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಿ ಹಾವೇರಿ ಸೇರಿದಂತೆ ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ಕಳೆದ ವರ್ಷಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರ ಮಾರಾಟವಾಗಿದ್ದು, ಇದಕ್ಕೆ ಕಾರಣವೇನು? ರಸಗೊಬ್ಬರ ಮಾರಾಟದ ಮೇಲೆ ನಿರಂತರ ನಿಗಾ ವಹಿಸಿ, ಅರ್ಹ ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

ಕುಡಿಯುವ ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಿ

ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲು ಆದ್ಯತೆ ನೀಡಬೇಕು. ಪಂಚಾಯತ್ ರಾಜ್ ಮತ್ತು ಇಂಧನ ಇಲಾಖೆ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುತ್ ಸಂಪರ್ಕ ಕಲ್ಪಿಸಲು ಠೇವಣಿಗಾಗಿ ಕಾಯಬಾರದು ಎಂದರು.

## ಖಾಸಗಿ ಬಸ್-ಕಾರ್ ನಡುವೆ ಭೀಕರ ಅಪಘಾತ: 7 ಮಂದಿ ಸಜೀವ ದಹನ

**ಯಾದಗಿರಿ:** ರಾಜ್ಯದಲ್ಲಿ ಮತ್ತೊಂದು ಹೃದಯ ಕಲುಕುವ ರಸ್ತೆ ದುರಂತ ಸಂಭವಿಸಿದ್ದು, ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಶಾಂತಪುರ ಕ್ರಾಸ್ ಬಳಿ ಖಾಸಗಿ ಬಸ್ ಮತ್ತು ಕಾರಿನ ನಡುವೆ ನಡೆದ ಭೀಕರ ಡಿಕ್ಕಿಯಲ್ಲಿ ಏಳು ಮಂದಿ ಸಜೀವ ದಹನಗೊಂಡಿರುವ ದುರ್ಘಟನೆ ಎಲ್ಲರನ್ನೂ ಬೆಚ್ಚಿಬೀಳುವಂತೆ ಮಾಡಿದೆ. ಈ ದುರಂತವು ಸ್ಥಳೀಯರಷ್ಟೇ ಅಲ್ಲದೆ ರಾಜ್ಯದಾದ್ಯಂತ ಆಘಾತ ಮತ್ತು ದುಃಖದ ವಾತಾವರಣವನ್ನು ಉಂಟುಮಾಡಿದೆ.



ಲಭ್ಯ ಮಾಹಿತಿಯ ಪ್ರಕಾರ, ಬೆಂಗಳೂರಿನಿಂದ ಕಲಬುರಗಿಯತ್ತ ಪ್ರಯಾಣಿಸುತ್ತಿದ್ದ ಖಾಸಗಿ ಬಸ್ ಹಾಗೂ ಕಲಬುರಗಿಯಿಂದ ಮಾನ್ವಿ ಕಡೆಗೆ ತೆರಳುತ್ತಿದ್ದ ಕಾರು ಶಾಂತಪುರ ಕ್ರಾಸ್ ಸಮೀಪ ಮುಖಾಮುಖಿಯಾಗಿ ಡಿಕ್ಕಿ ಹೊಡೆದಿವೆ. ಡಿಕ್ಕಿಯ ತೀವ್ರತೆ ಅಷ್ಟೊಂದು ಹೆಚ್ಚಾಗಿದ್ದು, ಎರಡೂ ವಾಹನಗಳು ನಿಯಂತ್ರಣ ಕಳೆದುಕೊಂಡು ತಕ್ಷಣವೇ ಬೆಂಕಿಗೆ ಆಹುತಿಯಾದವು. ಅಪಘಾತದ ಕೆಲವೇ ಕ್ಷಣಗಳಲ್ಲಿ ಕಾರು ಮತ್ತು ಬಸ್ ಎರಡೂ ಬೆಂಕಿಯಲ್ಲಿ ಆವರಿಸಿಕೊಂಡಿದ್ದು, ದಟ್ಟ ಹೊಗೆ ಹಾಗೂ ಬೆಂಕಿಯ ಜ್ವಾಲೆಗಳು ಸ್ಥಳವನ್ನು ಆವರಿಸಿವೆ.

ಈ ಭೀಕರ ಬೆಂಕಿಯ ಕಾರಣದಿಂದ ಕಾರಿನಲ್ಲಿದ್ದ ಏಳು ಮಂದಿ ಹೊರಬರಲು ಸಾಧ್ಯವಾಗದೇ ಸಜೀವವಾಗಿ ಸುಟ್ಟು ಕರಕಲಾಗಿದ್ದಾರೆ. ಮೃತರಲ್ಲಿ ಇಬ್ಬರು ಪುಟ್ಟ ಮಕ್ಕಳು ಸೇರಿರುವುದು ಈ ದುರಂತವನ್ನು ಇನ್ನಷ್ಟು ಮರ್ಮಭೇದಕವಾಗಿಸಿದೆ. ಬೆಂಕಿಯ ಉರಿ ಮತ್ತು ಹೊಗೆ ಅತಿಯಾಗಿ ಹರಡಿದ್ದರಿಂದ ಕಾರಿನಲ್ಲಿದ್ದವರಿಗೆ ಯಾವುದೇ ರೀತಿಯ ಸಹಾಯ ದೊರಕಲು ಸಾಧ್ಯವಾಗಿಲ್ಲ.

ಇನ್ನೊಂದೆಡೆ, ಬಸ್‌ನಲ್ಲಿ ಪ್ರಯಾಣಿಸುತ್ತಿದ್ದವರು ಡಿಕ್ಕಿಯ ಆಘಾತದಿಂದ ಬೆಚ್ಚಿಬಿದ್ದರೂ, ತಕ್ಷಣವೇ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಬಸ್‌ನಿಂದ ಹೊರಬಂದು ತಮ್ಮ ಪ್ರಾಣವನ್ನು ಉಳಿಸಿಕೊಂಡಿದ್ದಾರೆ. ಕೆಲವರು ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿರುವುದಾಗಿ ತಿಳಿದುಬಂದಿದೆ. ಸ್ಥಳೀಯರು ಹಾಗೂ ಪ್ರಯಾಣಿಕರು ಬೆಂಕಿ ನಂದಿಸಲು ಪ್ರಯತ್ನಿಸಿದರೂ, ಬೆಂಕಿಯ ತೀವ್ರತೆ ಮತ್ತು ವೇಗದಿಂದಾಗಿ ಅದನ್ನು ನಿಯಂತ್ರಿಸುವುದು ಸಾಧ್ಯವಾಗಲಿಲ್ಲ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಸುರಪುರ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಕೈಗೊಂಡಿದ್ದಾರೆ. ಬೆಂಕಿಯನ್ನು ನಂದಿಸಿದ ನಂತರ ಅವಶೇಷಗಳ ಪರಿಶೀಲನೆ ನಡೆಸಲಾಗಿದ್ದು, ಮೃತದೇಹಗಳನ್ನು ಹೊರತೆಗೆದು ಗುರುತಿಸುವ ಕಾರ್ಯ ಪ್ರಾರಂಭಿಸಲಾಗಿದೆ. ಘಟನೆ ಸ್ಥಳದಲ್ಲಿ ಕಂಡುಬಂದ ಪರಿಸ್ಥಿತಿಯನ್ನು ನೋಡಿ ಅಪಘಾತದ ಭೀಕರತೆ ಸ್ಪಷ್ಟವಾಗಿ ಗೋಚರಿಸಿದೆ.


ಪ್ರಾಥಮಿಕ ತನಿಖೆಯಲ್ಲಿ ಅಪಘಾತಕ್ಕೆ ಓವರ್ ಸ್ಪೀಡ್, ನಿಯಂತ್ರಣ ಕಳೆದುಕೊಳ್ಳುವುದು ಅಥವಾ ರಸ್ತೆ ಪರಿಸ್ಥಿತಿಗಳು ಕಾರಣವಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಬಸ್ ಚಾಲಕ ಮತ್ತು ಕಾರು ಚಾಲಕರನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದು, ಅಪಘಾತದ ನಿಖರ ಕಾರಣ ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

ಈ ದುರ್ಘಟನೆಯಿಂದ ಮೃತರ ಕುಟುಂಬಸ್ಥರು ಆಘಾತಕ್ಕೊಳಗಾಗಿದ್ದು, ಸ್ಥಳೀಯರಲ್ಲಿ ದುಃಖದ ವಾತಾವರಣ ಆವರಿಸಿದೆ. ನಿರಪರಾಧಿ ಪ್ರಾಣಗಳು ಇಂತಹ ರೀತಿಯಲ್ಲಿ ಕಳೆದುಹೋಗುತ್ತಿರುವುದು ರಾಜ್ಯದಲ್ಲಿ ರಸ್ತೆ ಸುರಕ್ಷತೆ ಕುರಿತ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ. ವಿಶೇಷವಾಗಿ ರಾತ್ರಿ ವೇಳೆಯ ವೇಗದ ಚಾಲನೆ, ನಿರ್ಲಕ್ಷ್ಯ ಹಾಗೂ ವಾಹನಗಳ ತಾಂತ್ರಿಕ ದೋಷಗಳು ಅಪಘಾತಗಳಿಗೆ ಕಾರಣವಾಗುತ್ತಿವೆ ಎಂಬ ಅಭಿಪ್ರಾಯ ಸಾರ್ವಜನಿಕರಲ್ಲಿ ವ್ಯಕ್ತವಾಗಿದೆ.

ಈ ಘಟನೆಯು ರಸ್ತೆ ಸುರಕ್ಷತೆ ನಿಯಮಗಳ ಕಟ್ಟುನಿಟ್ಟಿನ ಅನುಸರಣೆ, ಚಾಲಕರ ಜಾಗೃತಿಯ ಅಗತ್ಯತೆ ಮತ್ತು ತುರ್ತು ಸೇವೆಗಳ ಬಲವರ್ಧನೆಯ ಅವಶ್ಯಕತೆಯನ್ನು ಮತ್ತೊಮ್ಮೆ ಎತ್ತಿಹಿಡಿದಿದೆ. ಸರ್ಕಾರ ಹಾಗೂ ಸಾರಿಗೆ ಇಲಾಖೆ ಈ ರೀತಿಯ ದುರ್ಘಟನೆಗಳನ್ನು ತಡೆಯಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಒತ್ತಾಯಗಳು ಹೆಚ್ಚಾಗುತ್ತಿವೆ.

ಮೃತರ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು, ಗಾಯಾಳುಗಳಿಗೆ ಉತ್ತಮ ಚಿಕಿತ್ಸಾ ಸೌಲಭ್ಯ ಕಲ್ಪಿಸಬೇಕು ಎಂಬ ಆಗ್ರಹಗಳು ಕೇಳಿಬರುತ್ತಿವೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ತೀವ್ರಗೊಳಿಸಿದ್ದು, ಅಪಘಾತದ ನಿಖರ ಕಾರಣ ಶೀಘ್ರದಲ್ಲೇ ಬಹಿರಂಗವಾಗಲಿದೆ ಎಂದು ತಿಳಿಸಿದ್ದಾರೆ.

ಶಾಂತಪುರ ಕ್ರಾಸ್ ಬಳಿ ನಡೆದ ಈ ಭೀಕರ ಅಪಘಾತವು ರಸ್ತೆ ಸುರಕ್ಷತೆ ಬಗ್ಗೆ ಮತ್ತೊಮ್ಮೆ ಎಚ್ಚರಿಕೆಯ ಗಂಟೆ ಬಾರಿಸಿದ್ದು, ಇಂತಹ ದುರಂತಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅವಶ್ಯಕತೆಯನ್ನು ಸ್ಪಷ್ಟಪಡಿಸಿದೆ.



## ಬೂಕನಕೆರೆ ವಿಜಯ ರಾಮೇಗೌಡ ಹುಟ್ಟುಹಬ್ಬ

### ಅಭಿಮಾನಿ ಬಳಗದಿಂದ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ

**ಕೃಷ್ಣರಾಜಪೇಟೆ:** ಕಾಂಗ್ರೆಸ್ ಮುಖಂಡ ಬೂಕನಕೆರೆ ವಿಜಯರಾಮೆಗೌಡ ಅವರ 54ನೇ ವರ್ಷದ ಹುಟ್ಟು ಹಬ್ಬದ ಪ್ರಯುಕ್ತ ಅವರ ಅಭಿಮಾನಿ ಬಳಗದ ವತಿಯಿಂದ ಪಟ್ಟಣದ ದುಂಡುಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ಸಾರ್ವಜನಿಕ ತಾಲ್ಲೂಕು ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಹುಟ್ಟುಹಬ್ಬ ಆಚರಿಸಲಾಯಿತು,



ಬಳಿಕ ಮಾತನಾಡಿದ ತಾ.ಪಂ ಮಾಜಿ ಸದಸ್ಯ ಮಹದೇವ ಪ್ರಸಾದ್ ಕಾಂಗ್ರೆಸ್ ಮುಖಂಡರಾದ ವಿಜಯ ರಾಮೇಗೌಡ ಅವರ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಅವರ ಆದರ್ಶದಂತೆ ಹಿತೈಷಿಗಳು ಅಭಿಮಾನಿಗಳಿಂದ ರೋಗಿಗಳಿಗೆ ಹಣ್ಣು ಹಂಪಲು ನೀಡುವ ಮೂಲಕ ಹುಟ್ಟು ಹಬ್ಬದ ಶುಭ ಕೋರಿದ್ದೇವೆ,ಸಮಾಜ ಸೇವಕ ವಿಜಯ ರಾಮೇಗೌಡ ಅವರು ನಿಜಕ್ಕೂ ದೂರ ದೃಷ್ಟಿಯುಳ್ಳ ಉತ್ತಮ ಮನಸಿರುವ ವ್ಯಕ್ತಿ, ಸಂಕಷ್ಟ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷವನ್ನು ಕಟ್ಟಿ ಮಂಡ್ಯ ಜಿಲ್ಲೆಯಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಐತಿಹಾಸಿಕ ಜೋಡೊ ಯಾತ್ರೆಯ ತಾಲ್ಲೂಕಿನಿಂದ ಪ್ರಮುಖ ರೂವಾರಿ ವಹಿಸಿದ್ದ ನಾಯಕ, ಹಲವು ವರ್ಷಗಳಿಂದ ನೂರಾರು ಸಮಾಜ ಮುಖಿ ಕಾರ್ಯಕ್ರಮಗಳಲ್ಲಿ ತೊಡಗಿ ಸದೃಢ ಸಮಾಜಕ್ಕೆ ಶ್ರಮ ವಹಿಸಿರುವ ವ್ಯಕ್ತಿ ಹಾಗಾಗಿ ಇಂತಹ ಅಪರೂಪದ ವ್ಯಕ್ತಿಯ ಹುಟ್ಟುಹಬ್ಬವನ್ನು ಆಚರಿಸುವುದು ಅವರ ಹಿತೈಷಿ ಮತ್ತು ಅಭಿಮಾನಿಗಳ ಆದ್ಯ ಕರ್ತವ್ಯ, ಹಾಗಾಗಿ ಉತ್ತಮ ಆಲೋಚನೆ ಸದೃಢ ಸಮಾಜಕ್ಕೆ ಶ್ರಮವಸುವ ವಿಜಯ ರಾಮೇಗೌಡರಿಗೆ ಸರ್ಕಾರ ಕೂಡಲೇ ಅವರನ್ನ ಗುರುತಿಸಿ ಉತ್ತಮ ಸ್ಥಾನಮಾನ ನೀಡಲಿ ಎಂದು ಪಕ್ಷದ ರಾಜ್ಯ ನಾಯಕರನ್ನು ಒತ್ತಾಯಿಸಿ ಹುಟ್ಟುಹಬ್ಬ ಶುಭ ಕೋರಿದರು,

ಈ ಸಂದರ್ಭದಲ್ಲಿ ಡಾ:ಜ್ಞಾನೇಶ್,ಜಿ.ಪಂ ಮಾಜಿ ಸದಸ್ಯ ಕೋಡಿಮಾರನಹಳ್ಳಿ ದೇವರಾಜ್, ಪಿ.ಎಲ್.ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಅಘಲಯ ರಮೇಶ್, ಪುರಸಭಾ ಸದಸ್ಯ ರವೀಂದ್ರ ಬಾಬು, ತಾ.ಪ ಮಾಜಿ ಸದಸ್ಯ ಸಾಸಲು ಈರಪ್ಪ, ನಾರ್ಗೊನಹಳ್ಳಿ ನಾಗರಾಜು, ರಾಯಸಮುದ್ರ ಧನಂಜಯ, ಸಣ್ಣಿಂಗೇಗೌಡ, ಪಿ.ಎಲ್.ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಹಾಲಿ ನಿರ್ದೇಶಕ ಕಬ್ಬುಗೆರೆ ಪುಟ್ಟಸ್ವಾಮಿಗೌಡ, ಅಗಸರಹಳ್ಳಿ ಗೋವಿಂದರಾಜು, ಮಡುವಿನಕೋಡಿ ಉಮೇಶ್, ಬಳ್ಳೆಕೆರೆ ಯೋಗಣ್ಣ, ಕಾಂಗ್ರೆಸ್ ಮಹಿಳಾ ಘಟಕ ಅಧ್ಯಕ್ಷೆ ಮೀನಾಕ್ಷಿ, ಆರಾಧನಾ ಕಮಿಟಿ ಸದಸ್ಯ ಕಾಶಿ ಮುರುಕನಹಳ್ಳಿ ಪ್ರೀತಮ್, ಕಾಂಗ್ರೆಸ್ ಮುಖಂಡರಾದ ಮಡುವಿನಕೋಡಿ ಕಾಂತರಾಜು, ಸ್ನೇಹಿತ ರಮೇಶ್, ನಿವೃತ್ತ ಪ್ರಾಂಶುಪಾಲ ರಾಜಯ್ಯ, ಮಾಂಬಳ್ಳಿ ಜಯರಾಮ್, ಅಗ್ರಹಾರ ಕುಮಾರ್, ಬಲ್ಲೇನಹಳ್ಳಿ ಕುಮಾರ್, ಸೋಮಣ್ಣ, ನಾಟನಹಳ್ಳಿ ರಾಜು, ಐಚನಹಳ್ಳಿ ದಯಾನಂದ್, ಸಿದ್ದೀಕ್, ಹೆತ್ತಗೋನಹಳ್ಳಿ ನಾರಾಯಣ, ಮಡುವಿನಕೋಡಿ ನಾಗೇಶ್, ವಿಜಯ ರಾಮೇಗೌಡ ಆಪ್ತ ಸಹಾಯಕ ಬಸವರಾಜು, ಯುವ ಮುಖಂಡ ಬೂಕನಕೆರೆ ಅಜಯ್, ಹೊಸಹೊಳಲು ಅಭಿಷೇಕ್, ಪುನೀತ್, ಸಚಿನ್, ಪ್ರವೀಣ್, ಕಿರಣ್ ಸೇರಿದಂತೆ ಉಪಸ್ಥಿತರಿದ್ದರು.

## ಶೌಚಾಲಯಕ್ಕೆ ಹೋಗಿ ಬರುವುದರೊಳಗೆ ಬಂಗಾರದ ಅಂಗಡಿ ಕದ್ದ ಖದೀಮರು!




**ಬೆಂಗಳೂರು:** ರಾಜ್ಯದಲ್ಲಿ ಜ್ಯುವೆಲರಿ ಅಂಗಡಿಗಳ ಮೇಲೆ ನಡೆಯುತ್ತಿರುವ ದರೋಡೆ ಪ್ರಕರಣಗಳು ಆತಂಕಕಾರಿ ಮಟ್ಟಕ್ಕೆ ಏರುತ್ತಿರುವ ಸಂದರ್ಭದಲ್ಲಿ, ಬೆಂಗಳೂರಿನಲ್ಲಿ ಹಾಡಹಗಲೇ ನಡೆದ ಬಂಗಾರದ ಅಂಗಡಿ ದೋಚಾಟದ ಘಟನೆ ಸಾರ್ವಜನಿಕರಲ್ಲಿ ಭಯ ಹುಟ್ಟಿಸಿದೆ. ಅಂಗಡಿ ಮಾಲೀಕ ಕೇವಲ ಕೆಲವೇ ನಿಮಿಷಗಳ ಕಾಲ ಶೌಚಾಲಯಕ್ಕೆ ತೆರಳಿದ ಅವಧಿಯನ್ನು ಸೂಕ್ತವಾಗಿ ಬಳಸಿಕೊಂಡ ಖದೀಮರು, ಬಂಗಾರ-ಬೆಳ್ಳಿ ಆಭರಣಗಳು ಹಾಗೂ ನಗದನ್ನು ದೋಚಿ ಕ್ಷಣಾರ್ಧದಲ್ಲಿ ಪರಾರಿಯಾಗಿರುವುದು ಈ ಘಟನೆಯ ವಿಶೇಷತೆ.

ಈ ಘಟನೆ ಬನಶಂಕರಿ ಪ್ರದೇಶದಲ್ಲಿ ನಡೆದಿದ್ದು, ಮೂಕಾಂಬಿಕಾ ನಗರ ನಿವಾಸಿಯಾದ ಎನ್. ಮಂಜುನಾಥ್ (52) ಅವರ ಅಂಗಡಿಯಲ್ಲಿ ಕಳ್ಳತನ ನಡೆದಿದೆ. ಏಪ್ರಿಲ್ 13ರಂದು ಮಧ್ಯಾಹ್ನ ಸುಮಾರು 3.22ರ ವೇಳೆಗೆ ಮಂಜುನಾಥ್ ಅವರು ಹತ್ತಿರದ ಅಂಗನವಾಡಿಯ ಶೌಚಾಲಯಕ್ಕೆ ತೆರಳಿದ್ದರು. ಅಂಗಡಿಯನ್ನು ತೆರೆದೆಯೇ ಬಿಟ್ಟು ಹೊರಟ ಅವರು ಕೇವಲ 3 ನಿಮಿಷಗಳೊಳಗೆ, ಅಂದರೆ 3.25ರ ವೇಳೆಗೆ ಮರಳಿ ಬಂದಿದ್ದಾರೆ. ಆದರೆ ಈ ಅಲ್ಪ ಅವಧಿಯಲ್ಲೇ ಖದೀಮರು ಸೂಕ್ಷ್ಮವಾಗಿ ಪ್ಲಾನ್ ಮಾಡಿಕೊಂಡು ಅಂಗಡಿಗೆ ನುಗ್ಗಿ ದೋಚಾಟ ನಡೆಸಿರುವುದು ಗಮನ ಸೆಳೆಯುತ್ತದೆ.

ಮಂಜುನಾಥ್ ಅವರು ಅಂಗಡಿಗೆ ಹಿಂದಿರುಗುವಾಗಲೇ ಅಪರಿಚಿತ ವ್ಯಕ್ತಿಯೊಬ್ಬ ಪ್ರದರ್ಶನಕ್ಕೆ ಇಡಲಾಗಿದ್ದ ಆಭರಣಗಳನ್ನು ಕದ್ದುಕೊಂಡು ಹೋಗುತ್ತಿರುವುದನ್ನು ಗಮನಿಸಿದ್ದಾರೆ. ತಕ್ಷಣವೇ ಅವರನ್ನು ತಡೆಯಲು ಮುಂದಾದರೂ, ಮಾಲೀಕ ಬಂದಿರುವುದನ್ನು ಅರಿತ ಖದೀಮ ಆತುರದಲ್ಲಿ ಅಂಗಡಿಯಿಂದ ಹೊರಗೆ ಓಡಿಹೋಗಿದ್ದಾನೆ. ಅಂಗಡಿಯ ಹೊರಭಾಗದಲ್ಲೇ ಬೈಕ್‌ನಲ್ಲಿ ಕಾಯುತ್ತಿದ್ದ ಇಬ್ಬರು ಸಹಚರರೊಂದಿಗೆ ಕ್ಷಣಾರ್ಧದಲ್ಲಿ ಪರಾರಿಯಾಗಿದ್ದಾನೆ. ಮಂಜುನಾಥ್ ಅವರು ಆರೋಪಿಗಳನ್ನು ಹಿಂಬಾಲಿಸಲು ಯತ್ನಿಸಿದರೂ, ಅವರು ವೇಗವಾಗಿ ಸ್ಥಳವನ್ನು ತೊರೆದ ಕಾರಣ ಹಿಡಿಯಲು ಸಾಧ್ಯವಾಗಿಲ್ಲ.

ಕಳ್ಳತನಗೊಂಡ ವಸ್ತುಗಳ ವಿವರಗಳು ಈ ಪ್ರಕರಣದ ಗಂಭೀರತೆಯನ್ನು ಮತ್ತಷ್ಟು ಹೆಚ್ಚಿಸುತ್ತವೆ. ಸುಮಾರು 50 ಗ್ರಾಂ ತೂಕದ ಎರಡು ಪ್ಯಾಕೆಟ್ ಬೆಳ್ಳಿ ಸರಗಳು, 10 ಗ್ರಾಂ ತೂಕದ ಮೂರು ಕಾರ್ಡ್‌ಗಳಷ್ಟು ಚಿನ್ನದ ಮೂಗುತಿಗಳು ಹಾಗೂ 3,000 ನಗದು ಕಳವಾಗಿವೆ. ಈ ವಸ್ತುಗಳ ಒಟ್ಟು ಮೌಲ್ಯವನ್ನು ಸುಮಾರು 1.8 ಲಕ್ಷ ಎಂದು ಅಂದಾಜಿಸಲಾಗಿದೆ. ವಿಶೇಷವೆಂದರೆ, ಕಳ್ಳರು ಅತ್ಯಲ್ಪ ಸಮಯದಲ್ಲಿ ಅಂಗಡಿಯಲ್ಲಿ ಇರಿಸಿದ್ದ ಬೆಲೆಬಾಳುವ ವಸ್ತುಗಳನ್ನು ಗುರುತಿಸಿ ದೋಚಿರುವುದು ಅವರ ಪೂರ್ವ ಯೋಜನೆ ಮತ್ತು ಸ್ಥಳ ಪರಿಚಯವನ್ನು ಸೂಚಿಸುತ್ತದೆ.

ಅಂಗಡಿಯಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮೆರಾಗಳಲ್ಲಿ ಕಳ್ಳತನದ ಸಂಪೂರ್ಣ ದೃಶ್ಯ ಸೆರೆಯಾಗಿದ್ದು, ಇದು ಪೊಲೀಸರ ತನಿಖೆಗೆ ಪ್ರಮುಖ ಸುಳಿವಾಗಿದೆ. ದೃಶ್ಯಾವಳಿಗಳಲ್ಲಿ ಖದೀಮರು ಹೇಗೆ ಅಂಗಡಿಗೆ ಪ್ರವೇಶಿಸಿದರು, ಹೇಗೆ ಆಭರಣಗಳನ್ನು ಕದ್ದರು ಮತ್ತು ಹೇಗೆ ಪರಾರಿಯಾದರು ಎಂಬುದು ಸ್ಪಷ್ಟವಾಗಿ ಕಾಣಿಸಿಕೊಂಡಿದೆ. ಪೊಲೀಸರು ಈ ದೃಶ್ಯಾವಳಿಗಳನ್ನು ಆಧಾರವಾಗಿಸಿಕೊಂಡು ಆರೋಪಿಗಳನ್ನು ಗುರುತಿಸುವ ಕಾರ್ಯದಲ್ಲಿ ತೊಡಗಿದ್ದಾರೆ.

ಈ ಸಂಬಂಧ ಮಂಜುನಾಥ್ ಅವರು ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಬಿಎನ್‌ಎಸ್ ಸೆಕ್ಷನ್ 305 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಈಗಾಗಲೇ ಮೂವರು ಆರೋಪಿಗಳಿರುವುದು ದೃಢಪಟ್ಟಿದ್ದು, ಅವರು ಬಳಸಿದ ಸ್ಕೂಟರ್‌ನ ಸಂಖ್ಯೆಯನ್ನೂ ಪತ್ತೆಹಚ್ಚಲಾಗಿದೆ. ನಗರದೆಲ್ಲೆಡೆ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದ್ದು, ಆರೋಪಿಗಳನ್ನು ಬಂಧಿಸಲು ವಿಶೇಷ ತಂಡಗಳನ್ನು ರಚಿಸಲಾಗಿದೆ.

ಈ ಘಟನೆ ನಗರದ ಮಧ್ಯಭಾಗದಲ್ಲಿಯೇ, ಅದು ಕೂಡ ಜನಸಂಚಾರ ಇರುವ ಸಮಯದಲ್ಲಿ ನಡೆದಿರುವುದರಿಂದ ವ್ಯಾಪಾರಿಗಳು ಹಾಗೂ ಸಾರ್ವಜನಿಕರಲ್ಲಿ ಆತಂಕ ಹೆಚ್ಚಾಗಿದೆ. ಅಂಗಡಿಯನ್ನು ತೆರೆದಿಟ್ಟು ಸ್ವಲ್ಪ ಹೊತ್ತಿಗೂ ಹೊರಡುವುದು ಅಪಾಯಕಾರಿಯಾಗಿದೆ ಎಂಬ ಸಂದೇಶ ಈ ಘಟನೆ ನೀಡಿದೆ. ವಿಶೇಷವಾಗಿ ಜ್ಯುವೆಲರಿ ಅಂಗಡಿಗಳಂತಹ ಸಂವೇದನಾಶೀಲ ಸ್ಥಳಗಳಲ್ಲಿ ಭದ್ರತಾ ಕ್ರಮಗಳನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ.

## ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ

### ಏಪ್ರಿಲ್ 18 ರಂದು(ಇಂದು)ವಿಶೇಷ ಕಾರ್ಯಕ್ರಮ

**ಬೆಂಗಳೂರು:** ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ರಾಜ್ಯದ ಪ್ರಮುಖ ಸಂಸ್ಥೆಯಾಗಿರುವ 'ಕರ್ನಾಟಕ ಲೋಕಾಯುಕ್ತ' ತನ್ನ ಸಾರ್ಥಕ ಹಾಗೂ ಸಾಧನಾಮಯ ನಾಲ್ಕು ದಶಕಗಳ ಪಯಣವನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಐತಿಹಾಸಿಕ ಮೈಲುಗಲ್ಲನ್ನು ಸ್ಮರಿಸುವ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಭವ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ರಾಜ್ಯದ ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರವಹಿಸಿರುವ ಈ ಸಂಸ್ಥೆಯ ನಾಲ್ಕು ದಶಕಗಳ ಸೇವೆಯನ್ನು ಗೌರವಿಸುವ ಈ ಕಾರ್ಯಕ್ರಮಕ್ಕೆ ವಿಶೇಷ ಮಹತ್ವ ದೊರೆತಿದೆ.

ಈ ವಿಶೇಷ ಕಾರ್ಯಕ್ರಮವನ್ನು ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಉದ್ಘಾಟಿಸಲಿದ್ದು, ಅವರ ಉಪಸ್ಥಿತಿ ಕಾರ್ಯಕ್ರಮದ ಗೌರವವನ್ನು ಮತ್ತಷ್ಟು ಹೆಚ್ಚಿಸಲಿದೆ. ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರಾದ ಕೆ. ಎನ್. ಫಣೀಂದ್ರ ಹಾಗೂ ಬಿ. ವೀರಪ್ಪ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿರುವರು.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳು ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ, ಚುನಾಯಿತ ಪ್ರತಿನಿಧಿಗಳ ಆಸ್ತಿ ಹಾಗೂ ಹೊಣೆಗಾರಿಕೆಗಳ ಮಾಹಿತಿ ಪಾರದರ್ಶಕವಾಗಿ ದಾಖಲಿಸುವ ಹೊಸ ಡಿಜಿಟಲ್ ಪೋರ್ಟಲ್‌ಗೂ ಚಾಲನೆ ನೀಡಲಿದ್ದಾರೆ. ಜೊತೆಗೆ, ದೂರುಗಳ ಸ್ವೀಕಾರ, ಪರಿಶೀಲನೆ ಮತ್ತು ತನಿಖೆಯನ್ನು ಸುಗಮಗೊಳಿಸುವ ಉದ್ದೇಶದಿಂದ ರೂಪಿಸಲಾದ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೂ ಉದ್ಘಾಟನೆ ಮಾಡಲಿದ್ದಾರೆ. ಈ ತಂತ್ರಜ್ಞಾನಾಧಾರಿತ ವ್ಯವಸ್ಥೆಗಳು ಆಡಳಿತದಲ್ಲಿ ಪಾರದರ್ಶಕತೆ ಹೆಚ್ಚಿಸಲು ಹಾಗೂ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಲು ಸಹಾಯಕವಾಗಲಿದೆ.

ಕಾರ್ಯಕ್ರಮದ ಅಂಗವಾಗಿ, ಲೋಕಾಯುಕ್ತ ಸಂಸ್ಥೆಯ ಬೆಳವಣಿಗೆಯಲ್ಲಿ ಮಹತ್ವದ ಪಾತ್ರವಹಿಸಿದ ಮಾಜಿ ಲೋಕಾಯುಕ್ತರು ಹಾಗೂ ಉಪಲೋಕಾಯುಕ್ತರನ್ನು ಸನ್ಮಾನಿಸ ಲಾಗುವುದು. ಅವರ ಸೇವೆಯನ್ನು ಸ್ಮರಿಸಿ ಗೌರವಿಸುವ ಮೂಲಕ ಸಂಸ್ಥೆಯ ಪರಂಪರೆ ಮತ್ತು ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಉದ್ದೇಶ ಇದಾಗಿದೆ.



ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00ರವರೆಗೆ ವಿವಿಧ ವಿಷಯಾಧಾರಿತ ವಿಶೇಷ ವಿಚಾರಗೋಷ್ಠಿಗಳನ್ನು ಆಯೋಜಿಸಲಾಗಿದೆ. ಭ್ರಷ್ಟಾಚಾರದ ವಿರುದ್ಧದ ಹೋರಾಟ, ಆಡಳಿತ ಸುಧಾರಣೆ ಹಾಗೂ ಜನಸೇವೆಯ ಪಾರದರ್ಶಕತೆ ಕುರಿತಂತೆ ತಜ್ಞರು ಮತ್ತು ನಿವೃತ್ತ ನ್ಯಾಯಮೂರ್ತಿಗಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲಿದ್ದಾರೆ.

ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್ ಅವರು ಭ್ರಷ್ಟಾಚಾರ ಮತ್ತು ದುರಾಡಳಿತದ ವಿರುದ್ಧ ಹೋರಾಟದ ಮಹತ್ವವನ್ನು ವಿವರಿಸಲಿದ್ದಾರೆ. ಕೆ.ಎನ್. ಫಣೀಂದ್ರ ಅವರು ಲೋಕಾಯುಕ್ತ ಕಾಯ್ದೆಯಡಿ ನಾಗರಿಕರ ಕುಂದುಕೊರತೆಗಳಿಗೆ ಪರಿಹಾರ ಕಂಡುಕೊಳ್ಳುವ ವಿಧಾನಗಳ ಬಗ್ಗೆ ಮಾತನಾಡಲಿದ್ದಾರೆ. ಬಿ. ವೀರಪ್ಪ ಅವರು ಭ್ರಷ್ಟಾಚಾರವನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ಮಾರ್ಗಗಳ ಕುರಿತು ವಿಚಾರಗೋಷ್ಠಿಯನ್ನು ನಡೆಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ಕಳೆದ 40 ವರ್ಷಗಳಲ್ಲಿ ಹಲವಾರು ಸವಾಲುಗಳನ್ನು ಎದುರಿಸಿದರೂ ಸಹ, ಸಾರ್ವಜನಿಕ ಸೇವೆಯಲ್ಲಿ ಪಾರದರ್ಶಕತೆ ಮತ್ತು ಪ್ರಾಮಾಣಿಕತೆಯನ್ನು ಕಾಪಾಡುವಲ್ಲಿ ನಿರಂತರವಾಗಿ ಶ್ರಮಿಸಿದೆ. ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಅಧಿಕಾರ ದುರುಪಯೋಗದ ವಿರುದ್ಧ ಕಠಿಣ ಹೋರಾಟ ನಡೆಸುವ ಮೂಲಕ ಸಂಸ್ಥೆಯು ಜನರ ವಿಶ್ವಾಸವನ್ನು ಗಳಿಸಿದೆ.

ಇಂದಿನ ಸಮಾಜದಲ್ಲಿ ಭ್ರಷ್ಟಾಚಾರವು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು ಕಷ್ಟವಾದರೂ, ದೃಢ ನಿಶ್ಚಯ, ಪ್ರಾಮಾಣಿಕತೆ ಮತ್ತು ಸಮರ್ಪಣೆಯಿಂದ ಅದನ್ನು ನಿಯಂತ್ರಿಸಬಹುದು ಎಂಬ ನಂಬಿಕೆಯನ್ನು ಲೋಕಾಯುಕ್ತ ಸಂಸ್ಥೆ ಬೆಳೆಸಿದೆ. ಕಠಿಣ ಪರಿಸ್ಥಿತಿಗಳಲ್ಲಿಯೂ ಧೈರ್ಯದಿಂದ ಹಾಗೂ ತಾಳ್ಮೆಯಿಂದ ಹೋರಾಡಿದಾಗ ಮಾತ್ರ ನ್ಯಾಯದ ಜಯ ಸಾಧ್ಯ ಎಂಬ ಸಂದೇಶವನ್ನು ಸಂಸ್ಥೆ ನೀಡುತ್ತಿದೆ.

ಆಮಿಷಗಳಿಗೆ ಒಳಗಾಗದ, ಅಧಿಕಾರದ ಆಕರ್ಷಣೆಗೆ ಮಣಿಯದ ಹಾಗೂ ದೃಢ ಸಂಕಲ್ಪ ಹೊಂದಿರುವ ಪ್ರಾಮಾಣಿಕ ವ್ಯಕ್ತಿಗಳ ಅಗತ್ಯತೆ ಇಂದು ಸಮಾಜದಲ್ಲಿ ಹೆಚ್ಚಾಗಿದೆ. ಸಾರ್ವಜನಿಕ ಹಿತಾಸಕ್ತಿಯೇ ಪರಮ ಗುರಿಯಾಗಿರುವ ಸೇವಾ ಮನೋಭಾವವುಳ್ಳ ವ್ಯಕ್ತಿಗಳನ್ನು ಉತ್ತೇಜಿಸುವುದು ಕಾಲದ ಅಗತ್ಯವಾಗಿದೆ.

ಲೋಕಾಯುಕ್ತ ಸಂಸ್ಥೆಯು ಎಚ್ಚರಿಸುತ್ತಿರುವಂತೆ, ನಾವು ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ವಿಫಲವಾದರೆ, ಅನ್ಯಾಯವು ಮೇಲುಗೈ ಸಾಧಿಸಿ ನ್ಯಾಯವು ಹಿನ್ನಡೆಯಾಗುವ ಅಪಾಯವಿದೆ. ಆದ್ದರಿಂದ ಸಮಾಜದಲ್ಲಿ ಸತ್ಯನಿಷ್ಠೆ ಮತ್ತು ಹೊಣೆಗಾರಿಕೆಯನ್ನು ಬೆಳೆಸುವುದು ಅತ್ಯಂತ ಮುಖ್ಯವಾಗಿದೆ.

"ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ" ಎಂಬ ಧ್ಯೇಯವಾಕ್ಯವನ್ನು ಅಳವಡಿಸಿಕೊಂಡಿರುವ ಕರ್ನಾಟಕ ಲೋಕಾಯುಕ್ತ ಸಂಸ್ಥೆ, ನಾಲ್ಕು ದಶಕಗಳ ಯಶಸ್ವಿ ಪಯಣದ ನಂತರ ಇನ್ನಷ್ಟು ಶಕ್ತಿಯುತವಾಗಿ ಮುಂದಿನ ಹೆಜ್ಜೆಯನ್ನು ಇಡಲು ಸಜ್ಜಾಗಿದೆ. ಭ್ರಷ್ಟಾಚಾರರಹಿತ ಆಡಳಿತದ ಕನಸನ್ನು ಸಾಕಾರಗೊಳಿಸುವ ದಿಸೆಯಲ್ಲಿ ತನ್ನ ಸೇವೆಯನ್ನು ಮುಂದುವರಿಸಲು ಸಂಸ್ಥೆ ಬದ್ಧವಾಗಿದೆ.

## ನಾಪತ್ತೆಯಾಗಿದ್ದ ಮಹಿಳೆಯ ಅಸ್ಥಿಪಂಜರ ಅಡಿಕೆ ತೋಟದಲ್ಲಿ ಪತ್ತೆ

**ನೆಲಮಂಗಲ:** ನಾಪತ್ತೆಯಾಗಿದ್ದ ಮಹಿಳೆ ಯೊಬ್ಬಳ ಅಸ್ಥಿಪಂಜರ ಪತ್ತೆಯಾದ ಘಟನೆ ದಾಬಸ್ ಪೇಟೆ ಹಳೆ ನಿಜಗಲ್ ಸಮೀಪದ ಜಮೀನಿನಲ್ಲಿ ಬೆಳಕಿಗೆ ಬಂದಿದೆ. ಈ ಘಟನೆ ಪ್ರದೇಶದಲ್ಲಿ ಆತಂಕ ಹಾಗೂ ಸಂಚಲನಕ್ಕೆ ಕಾರಣವಾಗಿದೆ.

ಮೃತರನ್ನು ಯಮುನಾ (38) ಎಂದು ಗುರುತಿಸಲಾಗಿದೆ. ಮಾರ್ಚ್ 21ರಿಂದ ಯಮುನಾ ಇದ್ದಕ್ಕಿದ್ದಂತೆ ನಾಪತ್ತೆಯಾಗಿದ್ದ ಹಿನ್ನೆಲೆಯಲ್ಲಿ, ಅವರ ಪತಿ ಮಲ್ಲಿಕಾರ್ಜುನ ಅವರು ಕ್ಯಾತ್ಸಂದ್ರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಹುಡುಕಾಟ ನಡೆಸುತ್ತಿದ್ದರು.

ಈ ನಡುವೆ, ದಾಬಸ್ ಪೇಟೆ ಹಳೆ ನಿಜಗಲ್ ಬಳಿ ಇರುವ ಜಮೀನಿನಲ್ಲಿ ಅಸ್ಥಿಪಂಜರ, ತಲೆಬುರುಡೆ ಹಾಗೂ ಒಂದು ಬ್ಯಾಗ್ ಪತ್ತೆಯಾಗಿದೆ. ಸ್ಥಳೀಯರು ಇದನ್ನು ಗಮನಿಸಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮಾಹಿತಿ ಮೇರೆಗೆ ದಾಬಸ್ ಪೇಟೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಪತ್ತೆಯಾದ ಅಸ್ಥಿಪಂಜರ ಯಮುನಾ ಅವರದ್ದೇ ಆಗಿರುವ ಸಾಧ್ಯತೆ ವ್ಯಕ್ತವಾಗಿದೆ. ಯಮುನಾ ಅವರು ನಂದಿಹಳ್ಳಿ ರಿಲಯನ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ಸುಮಾರು 19 ವರ್ಷಗಳ ಹಿಂದೆ ಮಲ್ಲಿಕಾರ್ಜುನ ಎಂಬುವವರೊಂದಿಗೆ ವಿವಾಹವಾಗಿದ್ದರು. ದಂಪತಿಗಳಿಗೆ ಒಂದು ಗಂಡು ಹಾಗೂ ಒಂದು ಹೆಣ್ಣು ಮಗು ಇದೆ.

ಇದೇ ವೇಳೆ, ಯಮುನಾ ಅವರು ರಾಘವೇಂದ್ರ ಎಂಬುವವರೊಂದಿಗೆ ಅನೈತಿಕ ಸಂಬಂಧ ಹೊಂದಿದ್ದರು ಎಂಬ ಆರೋಪಗಳು ಕೇಳಿಬರುತ್ತಿದ್ದು, ಇದೇ ಹಿನ್ನೆಲೆಯಲ್ಲಿ ಕೊಲೆ ನಡೆದಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಪ್ರಕರಣದ ಹಿನ್ನಲೆ ಇನ್ನಷ್ಟು ಗಂಭೀರವಾಗಿದ್ದು, ಪೊಲೀಸರು ವಿವಿಧ ಕೋಣಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

ಸ್ಥಳದಲ್ಲಿ ಪತ್ತೆಯಾದ ತಲೆಬುರುಡೆ ಮತ್ತು ಇತರೆ ಅವಶೇಷಗಳನ್ನು ವೈಜ್ಞಾನಿಕ ಪರೀಕ್ಷೆಗೆ ಕಳುಹಿಸಲಾಗಿದ್ದು, ಡಿಎನ್‌ಎ ಪರೀಕ್ಷೆಯ ಮೂಲಕ ಗುರುತು ದೃಢಪಡಿಸುವ ಕಾರ್ಯ ನಡೆಯಲಿದೆ.

ಸದ್ಯ ದಾಬಸ್ ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಯಮುನಾ ನಾಪತ್ತೆಯ ಹಿಂದೆ ಇರುವ ನಿಜಾಂಶ ಹಾಗೂ ಕೊಲೆಯ ಕಾರಣವನ್ನು ಪತ್ತೆಹಚ್ಚಲು ಪೊಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

